ಅಂಚೇ ಇಲಾಖಾ.

ನಂ. 77—47. ತಾರೀಖು 13ನೇ ಮೇ 1884.

ಇದರಿಂದ ಸಕಲಜನಗಳಿಗೂ ತಿಳಿಯುವ ಬಗ್ಗೆ ಪ್ರಕಟಿಸಲ್ಪಡುವದೇನಂದರೆ, ಮೈಸೂರು ಮಹಾರಾಜ ರಾಜಾಸಾಹೆಬ್ ಬಹದೂರವರ ದೀವಾನರವರ ಅಪ್ಪಣೆ ಅನುಸರಿಸಿ ಈ ಕೆಳಗೆ ಕಂಡ ಸ್ಥಳಗಳೊಳಗೆ ಹೋಬಳಿ ಅಂಚೆ ಆಫೀಸ್‌ಗಳು ಸ್ಥಾಪಿಸಲ್ಪಟ್ಟಿರುತ್ತವೆ:—

ತಾಲ್ಲೂಕು.	ಅಂಚೇ ಆಫೀಸ್ ಸ್ಥಾಪಿಸಲ್ಪಟ್ಟ ಸ್ಥಳಗಳ ಹೆಸರು.
ಆನೆಕಲ್	ದೊಮ್ಮಸಂದ್ರ.
ನಂಜನಗೂಡು	ಹುಲ್ಲಹಳ್ಳಿ.

ಬಿ. ಮರಿಗಂಗಯ್ಯ,
ಅಂಚೇ ಬಕಷಿ.

ತುಮಕೂರು ಡಿಸ್ಟ್ರಿಕ್ಟ್.

ತಾರೀಖು 4ನೇ ಜೂ೯ 1884.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ, ತಿಪಟೂರು ಸಬ್ ರಿಜಿಸ್ಟ್ರೀ ಆಫೀಸ್‌ನಲ್ಲಿ ಬೇವಾರಸಾಗಿ ಯಿರತಕ್ಕ ಈ ಕೆಳಗೆ ವಿವರಿಸೋಣಾದ ದಸ್ತೈವಜನ್ನು ಹಾಜರ್ ಮಾಡಿದವನೇ ಯಾಗಲಿ ಅಥವಾ ವಾಪಸ್ ಪಡಿಯಲಿಕ್ಕೆ ಅವನಿಂದ ಕ್ರಮವಾಗಿ ಅಧಿಕಾರ ಹೊಂದಿದ ಮುತಾಲೀಕ ಯಾ ಹಕ್ಕುದಾರನೇ ಯಾಗಲೀ ಈ ನೋಟೀಸ್ ತಾರೀಖು ಲಗಾಯಿತು ವೆಂದು ತಿಂಗಳೊಳಗಾಗಿ ಸಬ್ ರಿಜಿಸ್ಟ್ರಾರ್ ರೂಬರೂಬು ಹಾಜರಾಗಿ ಅದನ್ನು ವಾಪಸು ತೆಗದುಕೊಳ್ಳಬೇಕು, ತಪ್ಪಿದರೆ 1877ನೇ ಇಸವಿ 3ನೇ ನಂಬರು ರಿಜಿಸ್ಟ್ರೇಷ್ಣ ಆಕ್ಟು 85ನೇ ಸೆಕ್ಷಣ ಅನುಸರಿಸಿ ಅದು ನಾಶಪಡಿಸಲ್ಪಡುವದು.

ದಸ್ತಾವೇಜು ನಂಬರ.	ದಸ್ತಾವೇಜು ತಾರೀಖು.	ರಿಜಿಸ್ಟ್ರಿಗೆ ಹಾಜರಾದ ತಾರೀಖು.	ದಸ್ತಾವೇಜು ರಿಜಿಸ್ಟ್ರಿ ನಾಶವೇ ಆಗುವ ದಿನ್ನಲ್ಲಿ ತಾರೀಖು.	ದಸ್ತಾವೇಜು ಬರದು ಕೊಟ್ಟವರ ಹೆಸರು ಮತ್ತು ವಾಸಸ್ಥಳ	ದಸ್ತಾವೇಜು ಬರಸಿಕೊಂಡವರ ಹೆಸರು ಮತ್ತು ವಾಸಸ್ಥಳ.	ದಸ್ತಾವೇಜಿನ ಸ್ವಭಾವ ಮತ್ತು ಕಿಮ್ಮತ್ತು
. .	17—8—81	29—12—81	24—6—82	ಹೊನ್ನವಳ್ಳಿ ಕಸಬಾ ಗ್ರಾಮದಲ್ಲಿ ಇರುವ ಚಿಕ್ಕ ಬೈರಪ್ಪನ ಮಗ ತಿಮ್ಮಣ್ಣಯ್ಯ	ತಿಪಟ್ಟೂರು ಗ್ರಾಮದಲ್ಲಿ ಯಿರುವ ಸೋಲೂರು ನಾರಣಪ್ಪನಮಗ ರಾಮಶೆಟ್ಟಿ	45 ರೂಪಾಯಿಗೆ ಹೊನ್ನವಳ್ಳಿ ಕಸಬೀಯಲ್ಲಿ ಯಿರುವ 5 ಅಂಕಣದ ಹೆಂಚಿನ ಮನೆ ಆಧಾರ ಪತ್ರ.

ಕೆ. ಮಹಮ್ಮದಲ್ಲಿ,
ಫಾರ್ ರಿಜಿಸ್ಟ್ರಾರ್.

ಮೈಸೂರು ಡಿಸ್ಟ್ರಿಕ್ಟ್.

ತಾರೀಖು 21ನೇ ಏಪ್ರೆಲ್ 1884.

ಇದರಿಂದ ತಿಳಿಸಲ್ಪಡುವದೇನಂದರೆ, ಮೈಸೂರು ಡಿಸ್ಟ್ರಿಕ್ಟಿನಲ್ಲಿ ಹಿಡುವಳೀಯಲ್ಲಿಲ್ಲದ ಕಂದಾಯ ಠರಾಯಿಸಲ್ಪಟ್ಟ ಮತ್ತು ಕಂದಾಯ ಠರಾಯಿಸಲ್ಪಡದ ತಮಾಂ ಜಮೀನುಗಳು, ಗ್ರಾಮ ಜೀಲೀಗಳು, ಅಮರಾಯಿ ವ ಅಮರಾಯಿ ಜೀಲೀಗಳು, ಇನ್ನುಗಳು ಅಡಗಿರುವ ಡಿಸ್ಟ್ರಿಕ್ಟು ಜಂಗ್ಲೀಗಳ ಪಸಾರೀ ಹುಟ್ಟುವಳೀಯನ್ನು, 1885ನೇ ಮಾರ್ಚೀ 31ರ ವರಿಗೆ ಜಮಾಇಸುವ ಹಕ್ಕು ದಾರೀಯು, ತಾಲ್ಲೂಕುವಾರಾಗಿ ಬಹಿರಂಗವಾದ ಹರಾಜು ಮೂಲಕ ಡೆಪ್ಯುಟಿ ಕಮ್ಮಿಷನರ ಆಫೀಸಿನಲ್ಲಿ ಮೈಸೂರು ಡಿಸ್ಟ್ರಿಕ್ಟು ಫಾರೆಸ್ಟ್ ಪ್ರೊಬೇಷನರಿಂದ, 1884ನೇ ಜೂ೯ 5ನೇ ಮೆಕ್ಕಂ ಮಧ್ಯಾನ್ಹ ವಿಕ್ರಯಿಸಲ್ಪಡುವದು.